**ದಿನಾಂಕ: 20.11.2021 ರಂದು ವಾರ್ಡ್ ಸಂಖ್ಯೆ 184 ಉತ್ತರಹಳ್ಳಿ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು.**

***ಹಾಜರಿದ್ದ ಅಧಿಕಾರಿಗಳು:-***

1. ಶ್ರೀ ಡಿ.ಸುಂದರಯ್ಯ- ವಾರ್ಡ್ ಸಮಿತಿ ನೋಡಲ್ ಅಧಿಕಾರಿ
2. ಶ್ರೀ ವೆಂಕಟರಮಣ.ಕೆ.ವಿ - ಸಹಾಯಕ ಅಭಿಯಂತರರು ಮತ್ತು ಸಂಚಾಲಕರು ಟಿ. (ವಾರ್ಡ್ 184 ಉತ್ತರಹಳ್ಳಿ)
3. ಡಾ// ದೀಕ್ಷಿತ - ಕೋವಿಡ್-19 ಆರೋಗ್ಯ ವೈದ್ಯಾಧಿಕಾರಿಗಳು, ಬೆಂಗಳೂರು ದಕ್ಷಿಣ ವಿಭಾಗ
4. ರೇಷ್ಮ.ಸಿ.ಎಸ್- ಬೃಹತ್ ನೀರುಗಾಲುವೆ
5. ಚೇತ ನಾಯಕ್- ಸಂಚಾರಿ ಪೋಲೀಸ್

***ಹಾಜರಿದ್ದ ಸಮಿತಿ ಸದಸ್ಯರು:-***

1. ಶ್ರೀ ಮೃತ್ಯುಂಜಯ.ಎಂ.ಎಸ್ – ಹನುಮಹಿಲ್ಸ್ ಬಡಾವಣೆRWA
2. ಶ್ರೀ ಅರುಣ್ – ಎ.ಜಿ.ಎಸ್ ಬಡಾವಣೆ RWA
3. ಶ್ರೀ ಅಮರ್.ಎಂ.ಆರ್ - ಎ.ಜಿ.ಎಸ್ ಬಡಾವಣೆ RWA
4. ಶ್ರೀ ಎಸ್.ಕೆ.ಸುದೀಂದ್ರ - ಪೂರ್ಣಪ್ರಜ್ಞಾಲೇಔಟ್ ಬಡಾವಣೆ RWA
5. ಶ್ರೀ ರಾಘವೇಂದ್ರ – ಜಯನಗರ ಹೌಸಿಂಗ್ ಬಡಾವಣೆ RWA
6. ಶ್ರೀ ಪಿಯೂಷ್ - ಹ್ಯಾಪಿ ವ್ಯಾಲಿ ಬಡಾವಣೆ RWA

ಮೇಲೆ ಹಾಜರಿದ್ದ ಸಮಿತಿ ಸದಸ್ಯರ ಹಾಗೂ ಅಧಿಕಾರಿಗಳ ಸಮ್ಮುಖದಲ್ಲಿ ವಾರ್ಡ್ ಸಮಿತಿ ನೋಡಲ್ ಅಧಿಕಾರಿಯಾದ ಶ್ರೀ ಡಿ.ಸುಂದರಯ್ಯ ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು, ಸದಸ್ಯರ ಮುಖ ಪರಿಚಯದೊಂದಿಗೆ ವಿವರಿಸುತ್ತಾ, ಹಾಜರಿದ್ದ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ಸ್ವಾಗತ ಕೋರಿದರು.

ಸದರಿ ಸಭೆಯಲ್ಲಿ ಈ ಕೆಳಕಂಡಂತೆ ವಿವಿಧ ವಿಷಯಗಳ ಬಗ್ಗೆ ವಾರ್ಡ್ ಸಮಿತಿಯು ವಿವರವಾಗಿ ಚರ್ಚಿಸಿದಂತೆ ಮುಂದಿನ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಅಧಿಕಾರಿ / ಇಲಾಖೆಗಳಿಗೆ ಸ್ರಚಿಸಲಾಗಿರುತ್ತದೆ.

**1. ಬೆಸ್ಕಾಂ ಇಲಾಖೆಗೆ ಸಂಬಂಧಪಟ್ಟಂತೆ.**

- ಪೂರ್ಣಪ್ರಜ್ಞಾ ಬಡಾವಣೆಯಲ್ಲಿ ವಿದ್ಯುತ್ ತಂತಿಯನ್ನು ತೆರವುಗೊಳಿಸಿ ವಿದ್ಯುತ್ ಕೇಬಲ್ ಅಳವಡಿಸಲು ಕೋರಿರುತ್ತಾರೆ.

ಈ ಮೇಲಿನ ಎಲ್ಲಾ ಅಂಶಗಳಿಗೆ ಕ್ರಮ ಕೈಗೊಳ್ಳಲು ಮಾನ್ಯ ನೋಡಲ್ ಅಧಿಕಾರಿ ರವರು ಸಂಬಂಧಪಟ್ಟ ಸಹಾಯಕ ಕಾರ್ಯಪಾಲಕ ಅಭಿಯಂತರರು ಬೆಸ್ಕಾಂ ಇಲಾಖೆ ರವರಿಗೆ ಸೂಚಿಸಿರುತ್ತಾರೆ.

2. **ಸಂಚಾರಿ ಪೋಲೀಸ್ ಠಾಣೆ ಇಲಾಖೆಗೆ ಸಂಬಂಧಪಟ್ಟಂತೆ.**

- ಪೂರ್ಣಪ್ರಜ್ಞಾ ಬಡಾವಣೆ, ಉದ್ಯಾನವನ 5ರ ಸುತ್ತಮುತ್ತಲು ನೈಟ್ ಪೆಟ್ರೋಲಿಂಗ್ ಮಾಡಲು ಕೋರಿರುತ್ತಾರೆ.
- ಹೆಚ್.ಎಂ.ಎಸ್ ಬಡಾವಣೆ ಸುತ್ತಮುತ್ತಲು ಪಾದಚಾರಿ ಮಾರ್ಗದ ಮೇಲೆ ನಿಲ್ಲಿಸುವ ವಾಹನಗಳನ್ನು ತೆರವುಗೊಳಿಸಲು ಕೋರಿರುತ್ತಾರೆ.
- ಎಜಿಎಸ್ ಬಡಾವಣೆ ಪಾರ್ಕ್ ಸುತ್ತಮುತ್ತಲು ನಿಲ್ಲಿಸುವ ವಾಹನಗಳನ್ನು ತೆರವುಗೊಳಿಸಲು ಕೋರಿರುತ್ತಾರೆ.

ಈ ಮೇಲಿನ ಎಲ್ಲಾ ಅಂಶಗಳಿಗೆ ಕ್ರಮ ಕೈಗೊಳ್ಳಲು ಮಾನ್ಯ ನೋಡಲ್ ಅಧಿಕಾರಿ ರವರು ಸಂಬಂಧಪಟ್ಟ **ಸಂಚಾರಿ** ಪೋಲೀಸ್ ಠಾಣೆ ರವರಿಗೆ ಸೂಚಿಸಿರುತ್ತಾರೆ.

3. **ಸ.ಕಾ.ನಿ.ಅ ಉತ್ತರಹಳ್ಳಿ ಉಪವಿಭಾಗಕ್ಕೆ ಸಂಬಂಧಪಟ್ಟಂತೆ**

- ಹೆಚ್.ಎಂ.ಎಸ್ ಬಡಾವಣೆಯ ಸುತ್ತಮುತ್ತಲಿನ ಪಾದಚಾರಿಯ ಮಾರ್ಗದಲ್ಲಿರುವ ಸಾಮಗ್ರಿಗಳನ್ನು ತೆರವುಗೊಳಿಸಲು ಕೋರಿರುತ್ತಾರೆ.

ಈ ಮೇಲಿನ ಎಲ್ಲಾ ಅಂಶಗಳಿಗೆ ಕ್ರಮ ಕೈಗೊಳ್ಳಲು ಮಾನ್ಯ ನೋಡಲ್ ಅಧಿಕಾರಿ ರವರು ಸಹಾಯಕ ಕಾರ್ಯಪಾಲಕ ಅಭಿಯಂತರರು ಉತ್ತರಹಳ್ಳಿ ಉಪವಿಭಾಗ ರವರಿಗೆ ಸೂಚಿಸಿರುತ್ತಾರೆ

ಈ ಎಲ್ಲಾ ವಿಷಯದ ಬಗ್ಗೆ ಚರ್ಚಿಸಲಾಗಿ ಸೂಕ್ತ ಕ್ರಮ ಕೈಗೊಳ್ಳುವ ನಿರೀಕ್ಷಣೆಯೊಂದಿಗೆ ಸಮಿತಿಯ ಅಧ್ಯಕ್ಷರಾದ ಶ್ರೀ ಡಿ.ಸುಂದರಯ್ಯ ರವರು ಎಲ್ಲರಿಗೂ ವಂದನೆಗಳನ್ನು ಕೋರುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಶ್ರೀ ಡಿ.ಸುಂದರಯ್ಯ
ನೋಡಲ್ ಅಧಿಕಾರಿ ಹಾಗೂ ಸ.ಕಾ.ನಿ.ಅ
ಉತ್ತರಹಳ್ಳಿ ಉಪವಿಭಾಗ

ಶ್ರೀ ವೆಂಕಟರಮಣ.ಕೆ.ವಿ
ಸಂಚಾಲಕರು ಹಾಗೂ ಸ.ಅ–184